ಗೂಡೆ ಮತ್ತು ಜೀರ್ಣಾವಸ್ಥೆಯಲ್ಲಿರುವ ಅರಮನೆಯ ಅವಶೇಷಗಳನ್ನು ಸಂರಕ್ಷಿಸಿ ಬಲಗೊಳಿಸಲು ಕ್ರಮ ವಹಿಸಿದೆ ಈ ಕಾರ್ಯವು ಪ್ರಗತಿಯಲ್ಲಿದೆ

878(201) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅಂಗವಿಕಲರ ಸಂಖ್ಯೆ ಎಷ್ಟು (ಹೆಣ್ಣು ಮತ್ತು ಗಂಡು ಪ್ರತ್ಯೇಕವಾಗಿ ವಿವರ ಒದಗಿಸುವುದು),

ಆ) ಅಂಗವಿಕಲರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ,

ಇ) ಹಾಗಿದ್ದಲ್ಲಿ ಅಂಗವಿಕಲರ ಅಭಿವೃದ್ಧಿ ನಿಗಮ ರಚಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ,

ಈ) ಹಾಗಿಲ್ಲವಾದಲ್ಲಿ ಕಾರಣಗಳೇನು?

ಶ್ರೀ ಹೆಚ್ ಕೆ ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) 2001ರ ಜನಗಣತಿ ಪ್ರಕಾರ ರಾಜ್ಯದಲ್ಲಿರುವ ಒಟ್ಟು ಅಂಗವಿಕಲರ ಸಂಖ್ಯೆ 9,40,643 ಅದರಲ್ಲಿ –

ಗಂಡಸರು–5,37,730

ಹೆಂಗಸರು–4,02,913

ಆ) ಸರ್ಕಾರವು ಅಂಗವಿಕಲರ ಕಲ್ಯಾಣಕ್ಕಾಗಿ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಮನರ್ ವಸತಿ ಹಾಗೂ ಸಾಮಾಜಿಕ ಭದ್ರತೆ ಯೋಜನೆಗಳನ್ನು ಜಾರಿಗೊಳಿಸುತ್ತಿದೆ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ

ಇ) ಹೌದು ಪರಿಶೀಲನೆಯಲ್ಲಿದೆ

ಈ) ಅನ್ವಯಿಸುವುದಿಲ್ಲ

ಅನುಬಂಧ

ಅಂಗವಿಕಲರಿಗೆ ಸರ್ಕಾರವು ಒದಗಿಸುತ್ತಿರುವ ಸೌಲಭ್ಯಗಳ ಮಾಹಿತಿಯು ಈ ಕೆಳಕಂಡಂತಿದೆ

1 ರಾಜ್ಯ ಸರ್ಕಾರವು ಅಂಗವಿಕಲ ಮಕ್ಕಳಿಗಾಗಿ (ನಾಲ್ಕು ಅಂಧ ಮಕ್ಕಳು + ನಾಲ್ಕು ಕಿವುಡು ಮತ್ತು ಮೂಕ ಮಕ್ಕಳ ಶಾಲೆ) 8 ವಿಶೇಷ ಶಾಲೆಗಳನ್ನು ನಡೆಸುತ್ತಿದ್ದು ಅಲ್ಲಿ ಓದುತ್ತಿರುವ ಅಂಧ ಮತ್ತು ಕಿವುಡು ಮಕ್ಕಳಿಗೆ ಉಚಿತವಾಗಿ ಊಟ, ವಸತಿ ಬಟ್ಟೆ ಬರೆ ಮತ್ತು ಪುಸ್ತಕಗಳನ್ನು ಒದಗಿಸಲಾಗುತ್ತಿದೆ

2 34 ಸ್ವಯಂ ಸೇವಾ ಸಂಸ್ಥೆಯವರು ನಡೆಸುತ್ತಿರುವ ವಿಶೇಷ ಶಾಲೆಗಳಿಗೆ ಹಾಗೂ ತರಬೇತಿ ಕೇಂದ್ರಗಳಿಗೆ ರಾಜ್ಯ ಸರ್ಕಾರವು ಅನುದಾನ ನೀಡುತ್ತಿದೆ (

3 ಒಂದನೇ ತರಗತಿಯಿಂದ ವಿಶ್ವವಿದ್ಯಾನಿಲಯದ ಶಿಕ್ಷಣ ಮಟ್ಟದಲ್ಲಿ ಓದುತ್ತಿರುವ ಅರ್ಹ ಅಂಗವಿಕಲ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ

4 ಪ್ರತಿಭಾವಂತ ಅಂಗವಿಕಲ ಮಕ್ಕಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ

5 ರಾಜ್ಯದಲ್ಲಿರುವ ಎಲ್ಲಾ ಅಂಧ ಮಕ್ಕಳಿಗೆ ಬೇಕಾಗಿರುವ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ ಉಚಿತವಾಗಿ ನೀಡಲಾಗುತ್ತಿದೆ

6 ಪಿ ಯು ಸಿ ಮತ್ತು ಬಿ ಎ ತರಗತಿಗಳಲ್ಲಿ ಓದುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ವರ್ಯ ಪುಸ್ತಕಗಳನ್ನು ಆಡಿಯೋ ಕ್ಯಾಸೆಟ್‌ಗಳಲ್ಲಿ ಮುದ್ರಿಸಿ ಟೇವ್‌ರೆಕಾರ್ಡರ್ ಸಹಿತ ಪ್ರಾಂಶುಪಾಲರ ಮೂಲಕ ನೀಡಲಾಗುತ್ತಿದೆ

7 ರಾಜ್ಯ ಸರ್ಕಾರವು ಸಿ ಮತ್ತು ಡಿ ಹುದ್ದೆಗಳಲ್ಲಿ ಅಂಗವಿಕಲರಿಗೆ ಶೇ 5ರಷ್ಟು ಮೀಸಲಾತಿ ಕಲ್ಪಿಸಲಾಗಿದೆ

8 ಸ್ವಯಂ ಉದ್ಯೋಗಕ್ಕಾಗಿ ಆಧಾರ ಯೋಜನೆಯಡಿ ಧನ ಸಹಾಯ

9 ದೂರವಾಣಿ ಬೂತುಗಳನ್ನು ಅಂಗವಿಕಲರಿಗೆ ಸ್ವಯಂ ಉದ್ಯೋಗಕ್ಕಾಗಿ ನೀಡಲಾಗುತ್ತಿದೆ

10 ಎನ್ ಹೆಚ್ ಎಫ್ ಡಿ ಸಿ ಸಂಸ್ಥೆಯಿಂದ ಸಾಲ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ

11 ಬೆಂಗಳೂರಿನಲ್ಲಿ ಅಂಗವಿಕಲ ನೌಕರರ ಮತ್ತು ತರಬೇತಿದಾರರಾದ ಮಹಿಳೆಯರಿಗೆ ಹಾಗೂ ಪುರುಷರಿಗೆ ಪ್ರತ್ಯೇಕವಾಗಿ ವಸತಿ ನಿಲಯವನ್ನು ನಡೆಸಲಾಗುತ್ತಿದೆ

12 ಅಂಗವಿಕಲರಿಗೆ ಸಾಧನ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ

13 ಅಂಗವಿಕಲತೆಯನ್ನು ಶಸ್ತ್ರ ಚಿಕಿತ್ಸೆಯಿಂದ ನಿವಾರಿಸಲು ವೈದ್ಯಕೀಯ ಶಸ್ತ್ರ ಚಿಕಿತ್ಸೆಗಾಗಿ ಧನ ಸಹಾಯ ನೀಡಲಾಗುತ್ತಿದೆ

14 ಅಂಗವಿಕಲರಿಗೆ ರೂ 125 ಗಳ ಮಾಸಿಕ ಪೋಷಣಾ ಭತ್ಯೆ ನೀಡಲಾಗುತ್ತದೆ

15 ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ, ತಾಯಿ ಹಾಗೂ ಪೋಷಕರಿಗೆ ಸಾಮೂಹಿಕ ವಿಮೆ ಯೋಜನೆ ಸೌಲಭ್ಯವಿರುತ್ತದೆ

16 ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವ ಅಂಗವಿಕಲ ವ್ಯಕ್ತಿಗಳಿಗೆ ಪ್ರೋತ್ಸಾಹ ಧನ ನೀಡಲಾಗುತ್ತಿದೆ

17 ರಾಜ್ಯದಲ್ಲಿರುವ ಎಲ್ಲಾ ಅಂಧರಿಗೆ ಉಚಿತ ಬಸ್‌ಪಾಸ್ ಸೌಲಭ್ಯವನ್ನು ನೀಡಲಾಗಿರುತ್ತದೆ

18 50000 ವಿವಿಧ ಅಂಗವಿಕಲರಿಗೂ ರಿಯಾಯಿತಿ ದರದಲ್ಲಿ ಬಸ್‌ಪಾಸ್ ಸೌಲಭ್ಯವನ್ನು ನೀಡಲಾಗಿರುತ್ತದೆ

19 ಅಂಗವಿಕಲರಿಗೆ ಗುರುತಿನ ಚೀಟಿಯನ್ನು ನೀಡಲಾಗುತ್ತಿದೆ

20 ರಾಜ್ಯ ಸರ್ಕಾರದಿಂದ ಅಂಗವಿಕಲರ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಒಂದು ಸಂಸ್ಥೆ ಮತ್ತು 5 ವ್ಯಕ್ತಿಗಳನ್ನು ಪ್ರತಿ ವರ್ಷವು ಗುರುತಿಸಿ ರಾಜ್ಯ ಪ್ರಶಸ್ತಿಯನ್ನು ನೀಡಲಾಗುತ್ತಿದೆ

21 ಅಂಗವಿಕಲ ಮಕ್ಕಳ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ವಿಶೇಷ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿಯನ್ನು ನೀಡಲಾಗುತ್ತಿದೆ

22 ನಿರ್ಗತಿಕ ವೃದ್ಧರಿಗೆ ಹಾಗೂ ಅಂಗವಿಕಲರಿಗೆ ಉಚಿತವಾಗಿ ಊಟ, ವಸತಿ ಹಾಗೂ ವೈದ್ಯಕೀಯ ಸೌಲಭ್ಯ ಮತ್ತು ರಕ್ಷಣೆ ಒದಗಿಸುವ ಉದ್ದೇಶದಿಂದ ಸಮಾಜ ಸೇವಾ ಸಂಕೀರ್ಣವನ್ನು ಬೆಂಗಳೂರಿನಲ್ಲಿ ಸ್ಥಾಪಿಸಲಾಗಿದೆ

23 ಅಂಗವಿಕಲರಿಗೆ ಲಭ್ಯವಿರುವ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಮಾಹಿತಿಯನ್ನು ಒದಗಿಸಲು ಸಲಹಾ ಮತ್ತು ಮಾಹಿತಿ ಕೇಂದ್ರವನ್ನು ಸ್ಥಾಪಿಸಲಾಗಿದೆ

24 ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳ ಸಹಯೋಗದಿಂದ ವಿಶೇಷ ಶಿಕ್ಷಕರ ತರಬೇತಿಗಾಗಿ ಮೈಸೂರಿನಲ್ಲಿ ಕಿವುಡು ಮತ್ತು ಅಂಧ ಮಕ್ಕಳಿಗೆ ಶಿಕ್ಷಣ ನೀಡುವ ವಿಶೇಷ ಶಿಕ್ಷಕರ ತರಬೇತಿ ಶಾಲೆಗಳನ್ನು ನಡೆಸಲಾಗುತ್ತಿದೆ

25 ವಿವಿದ ರೀತಿಯ ಅಂಗವಿಕಲರಿಗೆ ಸಹಾಯ ನೀಡಲು ಬೆಂಗಳೂರಿನ ಸಂಜಯಗಾಂಧಿ ಅಪಘಾತ ಆಸ್ಪತ್ರೆಯಲ್ಲಿ ರಾಜ್ಯ ಸಲಹಾ ಮತ್ತು ಮಾಹಿತಿ ಕೇಂದ್ರವನ್ನು ನಡೆಸಲಾಗುತ್ತಿದೆ ಇಲ್ಲಿ ತಜ್ಞ ವೈದ್ಯರು ಉಚಿತ ವೈದ್ಯಕೀಯ ಸಲಹೆಯನ್ನು ನೀಡುತ್ತಾರೆ

26 ರಾಜ್ಯ ಸರ್ಕಾರದ ಅನುದಾನದಿಂದ 27 ವೃದ್ಧಾಶ್ರಮಗಳನ್ನು ಹಾಗೂ ಕೇಂದ್ರ ಸರ್ಕಾರದ ಅನುದಾನದಿಂದ 41 ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿದ್ದು ಈ ವೃದ್ಧಾಶ್ರಮಗಳಲ್ಲಿ

ಅಂಗವಿಕಲರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯಗಳನ್ನು ನೀಡಲಾಗುತ್ತಿದೆ

27 ಕರ್ನಾಟಕ ರಾಜ್ಯವು ಹಿರಿಯ ನಾಗರಿಕರಿಗೆ ರಾಜ್ಯ ನೀತಿಯನ್ನು ಪ್ರಕಟಿಸಿದ್ದು ಇದನ್ನು ಅನುಷ್ಠಾನಗೊಳಿಸಲು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಕಾರ್ಯಪಡೆಯನ್ನು ರಚಿಸಲಾಗಿದೆ ಈ ಕಾರ್ಯ ನೀತಿಯಡಿಯಲ್ಲಿ ಬೆಂಗಳೂರು, ಹುಬ್ಬಳ್ಳಿ–ಧಾರವಾಡ, ಗುಲ್ಬರ್ಗಾ ಮತ್ತು ಬೆಳಗಾವಿ ನಗರಗಳಲ್ಲಿ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳ ಸಹಾಯದೊಂದಿಗೆ ಸ್ಥಾಪಿಸಲಾಗಿದೆ ಹಿರಿಯ ನಾಗರಿಕರಿಗಾಗಿ 6 ಮಹಾನಗರ ಪಾಲಿಕೆಗಳ ವ್ಯಾಪ್ತಿಗಳಲ್ಲಿ ಅಂದರೆ ಬೆಂಗಳೂರು, ಮೈಸೂರು, ಹುಬ್ಬಳ್ಳಿ–ಧಾರವಾಡ, ಗುಲ್ಬರ್ಗಾ, ಮಂಗಳೂರು ಮತ್ತು ಬೆಳಗಾವಿ ನಗರಗಳಲ್ಲಿ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯರ ಸಹಾಯವಾಣಿಗಳನ್ನು ಸ್ಥಾಪಿಸಲಾಗಿದೆ

28 ಪ್ರಸಕ್ತ ಸಾಲಿನಿಂದ ಅಂಗವಿಕಲರಿಗೆ ತರಬೇತಿ ನೀಡಿ ಉದ್ಯೋಗ ಸೌಲಭ್ಯ ಕಲ್ಪಿಸುವ ಯೋಜನೆಯನ್ನು, 20 ಜಿಲ್ಲೆಗಳಲ್ಲಿ ಜಾರಿಗೊಳಿಸಲಾಗುತ್ತಿದೆ

29 ಅಂಗವಿಕಲ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ 20 ಜಿಲ್ಲೆಗಳಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದೆ

30 ಅಂಗವಿಕಲರ ಸ್ವಸಹಾಯ ಗುಂಪುಗಳ ಮೂಲಕ ಅಂಗವಿಕಲರಿಗೆ ಉದ್ಯೋಗಾವಕಾಶ ಕಲ್ಪಿಸಲು ಸ್ಫೂರ್ತಿ ಸ್ವಸಹಾಯ ಯೋಜನೆಯನ್ನು ಎಲ್ಲಾ ಜಿಲ್ಲೆಗಳ ಒಂದು ತಾಲ್ಲೂಕಿನಲ್ಲಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ

31 ಅಂಗವಿಕಲ ವ್ಯಕ್ತಿಗಳಿಗೆ ಸಮಾಜದ ಮುಖ್ಯವಾಹಿನಿಯಲ್ಲಿ ತರಲು, ಅಂಗವಿಕಲ, ಹಣಕಾಸು ಅಭಿವೃದ್ಧಿ ಸಂಸ್ಥೆಯನ್ನು ಸ್ಥಾಪಿಸುವುದು ಅಗತ್ಯ ಎಂದು ತಿಳಿದು ಇಲಾಖೆಯಿಂದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ

879(265) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?